# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 543 |
| ಮಾನ್ಯ ಸದಸ್ಯರ ಹೆಸರು | ಶ್ರೀ.ಎಂ ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 20-02-2023 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರಿನ ಎಲ್ಲಾ ವಾರ್ಡ್‌ಗಳಲ್ಲಿ ಮತ್ತು ರಾಜ್ಯದ ಪ್ರಮುಖ ನಗರಗಳಲ್ಲಿ ಸಾಂಕ್ರಾಮಿಕ ರೋಗಗಳ ತಪಾಸಣೆಗೆ ಒಟ್ಟು ಎಷ್ಟು ಉದ್ದೇಶಿತ ನಮ್ಮ ಕ್ಲಿನಿಕ್ ಗಳನ್ನು ಸ್ಥಾಪಿಸಲಾಗಿದೆ: ಈ ಯೋಜನೆಗೆ ಮೀಸಲಿಟ್ಟಿರುವ ಹಣವೆಷ್ಟು ಮತ್ತು ಇದುವರೆಗೂ ಖರ್ಚುಮಾಡಿರುವ ಹಣವೆಷ್ಟು: | 2022-23ನೇ ಸಾಲಿನ ಆಯವ್ಯಯ ಘೋಷಣೆಯಂತೆ ಬೆಂಗಳೂರಿನ ಎಲ್ಲಾ ವಾರ್ಡ್‌ಗಳು ಸೇರಿದಂತೆ ರಾಜ್ಯಾದ್ಯಂತ ಪ್ರಮುಖ ನಗರಗಳಲ್ಲಿ 438 ನಮ್ಮ ಕ್ಲಿನಿಕ್‌ಗಳನ್ನು ಸ್ಥಾಪಿಸಲು ಆದೇಶಿಸಲಾಗಿರುತ್ತದೆ.<br>ಅದರಂತೆ ಪ್ರಸ್ತುತ ಬೆಂಗಳೂರು ನಗರ ಮತ್ತು ಇತರೆ ನಗರಗಳಲ್ಲಿ ಒಟ್ಟು 274 ನಮ್ಮ ಕ್ಲಿನಿಕ್‌ಗಳನ್ನು ಸ್ಥಾಪಿಸಲಾಗಿದೆ.<br>ಈ ನಮ್ಮ ಕ್ಲಿನಿಕ್ ಗಳ ಅನುಷ್ಠಾನಕ್ಕಾಗಿ 15 ನೇ ಹಣಕಾಸಿನ ಆಯೋಗದಡಿ 12 ತಿಂಗಳ ಅವಧಿಗೆ ರೂ. 155.77 ಕೋಟಿಗಳು ಅನುಮೋದನೆಯಾಗಿದ್ದು, ಈವರೆಗೆ ರೂ.5,84,05,293/-ಗಳನ್ನು ಖರ್ಚು ಮಾಡಲಾಗಿರುತ್ತದೆ. |
| ಆ | ರಾಜ್ಯದಲ್ಲಿ ಮಹಿಳಾ ಆರೋಗ್ಯ ಸಮಸ್ಯೆಗಳಿಗೆ ಸಲಹೆ ನೀಡಲು ಒಟ್ಟು ಎಷ್ಟು ಉದ್ದೇಶಿತ ಮಹಿಳಾ ಸ್ವಾಸ್ಥ್ಯ ಕೇಂದ್ರಗಳನ್ನು ಇದುವರೆಗೂ ಸ್ಥಾಪಿಸಲಾಗಿದೆ: | ರಾಜ್ಯದಲ್ಲಿ ಮಹಿಳಾ ಆರೋಗ್ಯ ಸಮಸ್ಯೆಗಳಿಗೆ ಸಲಹೆ ನೀಡಲು 128 ಮಹಿಳಾ ಸ್ವಾಸ್ಥ್ಯ ಕೇಂದ್ರಗಳನ್ನು ಸ್ಥಾಪಿಸಲು ಕ್ರಮಕೈಗೊಳ್ಳಲಾಗುತ್ತಿದೆ.<br>ಮಹಿಳಾ ಸ್ವಾಸ್ಥ್ಯ ಕೇಂದ್ರಗಳನ್ನು ಸ್ಥಾಪಿಸಲು ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನ ಕಾರ್ಯ ಕ್ರಮದಡಿಯಲ್ಲಿ ಅನಾವರ್ತಕ ವೆಚ್ಚಕ್ಕೆ ರೂ.3.20 ಕೋಟಿಗಳು ಅನುಮೋದನೆಯಾಗಿರುತ್ತದೆ ಹಾಗೂ 15 ನೇ ಹಣಕಾಸು ಆಯೋಗದಡಿ ತಜ್ಞ ವೈದ್ಯಾಧಿಕಾರಿಗಳ ಸೇವೆ ಪಡೆಯಲು ರೂ.19.20 ಕೋಟಿಗಳು ಅನುಮೋದನೆಯಾಗಿದ್ದು, ಈವರೆಗೆ ರೂ.77,28,635/- ಗಳಷ್ಟು ವೆಚ್ಚ ಮಾಡಲಾಗಿದೆ. |
| ಇ | ಈ ಯೋಜನೆಗೆ ಮೀಸಲಿಟ್ಟಿರುವ ಹಣವೆಷ್ಟು ಮತ್ತು ಇದುವರೆಗೂ ಖರ್ಚುಮಾಡಿರುವ ಹಣವೆಷ್ಟು: | |
| ಈ | ಬೆಳಗಾವಿಯಲ್ಲಿ ಕಿದ್ವಾಯಿ ಪ್ರಾದೇಶಿಕ ಕ್ಯಾನ್ಸರ್ ಕೇಂದ್ರ ಸ್ಥಾಪನೆಯಾಗಿದೆಯೇ?(ಹಾಗಿದ್ದಲ್ಲಿ ವಿವರ ನೀಡುವುದು) | 2022-23ನೇ ಸಾಲಿನ ಆಯವ್ಯಯ ಘೋಷಣೆಯಂತೆ ಬೆಳಗಾವಿಯಲ್ಲಿ ಕಿದ್ವಾಯಿ ಪ್ರಾದೇಶಿಕ ಕ್ಯಾನ್ಸರ್ ಕೇಂದ್ರವನ್ನು 50 ಕೋಟಿ ರೂಗಳ ವೆಚ್ಚದಲ್ಲಿ ಸ್ಥಾಪಿಸುವ ಸಂಬಂಧ ಆದೇಶ ಸಂಖ್ಯೆ:ಎಂಇಡಿ 43 ಕೆಯುಎಂ 2022 ದಿ:27.09.2022 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. |

ಆಕುಕ 25 ಎಸ್‌ಎಂಎಂ 2023

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು